# ಪ್ರಧಾನ ಸಿ.ಜೆ. ಮತ್ತು ಜೆ ಎಂಎಫ್‌ಸಿ ನ್ಯಾಯಾಲಯ, ಮದ್ದೂರು

| | | |
|---|---|---|
| ಸಾಕ್ಷಿಯ ಹೆಸರು | :- | ಎಂ.ಶ್ರೀನಿವಾಸ್ |
| ತಂದೆ/ಗಂಡನ ಹೆಸರು | :- | ಲೇ ದೊಡ್ಡಮಾಯಣ್ಣ ಉಃ ರಾಮಣ್ಣ |
| ವಯಸ್ಸು | :- | 50 ವರ್ಷ |
| ಉದ್ಯೋಗ | :- | ಹೆಚ್ ಸಿ |
| ವಾಸಸ್ಥಳ | :- | ಕೆ ಎಂ ದೊಡ್ಡಿ |

(ಸಾಕ್ಷಿಗೆ ದಿನಾಂಕಃ 27-01-2026 ರಂದು ಪ್ರಮಾಣ ವಚನ ಬೋಧಿಸಲಾಯಿತು)

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ನಾನು ದಿ 03-02-2017 ರಿಂದ ದಿ 16-04-2020 ರವರೆಗೆ ಮತ್ತು ದಿ 02-07-2025 ರಿಂದು ಇದುವರೆಗೂ ಕೆ ಎಂ ದೊಡ್ಡಿ ಪೊಲೀಸ್ ಠಾಣೆಯಲ್ಲಿ ಹೆಚ್‌ಸಿ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 02-04-2019 ರಂದು ರಾತ್ರಿ 10.15 ಗಂಟೆ ಸಮಯದಲ್ಲಿ ನಾನು ಠಾಣಾ ಪ್ರಭಾರ ಕರ್ತವ್ಯದಲ್ಲಿದ್ದಾಗ ಚಾಸಾ-1 ರವರು ನೀಡಿದ ದೂರನ್ನು ಸ್ವೀಕರಿಸಿಕೊಂಡು, ಪ್ರಕರಣ ದಾಖಲು ಮಾಡಿ, ಪ್ರ.ವ.ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಹಿರಿಯಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ಸಾಕ್ಷಿಯು ನಿಪಿ-2 ರ ದೂರಿನಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-2 (ಬಿ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ನಿಪಿ-10 ಎಂದು, ಸಾಕ್ಷಿಯ ಸಹಿಯನ್ನು ನಿಪಿ-10 (ಎ) ಎಂದು ಗುರುತಿಸಲಾಯಿತು. ಚಾಸಾ-2 ರಿಂದ 5 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ನಂತರ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-10 ರವರಿಗೆ ವರ್ಗಾಯಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿಯ ಪರ ಶ್ರೀ.ಹೆಚ್ ಬಿಎನ್ ವಕೀಲರವರಿಂದಃ**

ನನ್ನ ಮೇಲಾಧಿಕಾರಿ ನೀಡಿದ ಸುಳ್ಳು ದೂರಿಗೆ ಅನುಗುಣವಾಗಿ ಸುಳ್ಳು ಪ್ರ.ವ.ವ ದಾಖಲಿಸಿದ್ದೇನೆಂದರೆ ಸರಿಯಲ್ಲ. ಪ್ರಕರಣಕ್ಕೆ ಅನುಕೂಲವಾಗಲಿ ಎಂದು ಚಾಸಾ-1 ರವರು ನೀಡಿದ

ಮೂಮಾ ವನ್ನು ವಶಪಡಿಸಿಕೊಂಡಿದ್ದೆನೆಂದರೆ ಸರಿಯಲ್ಲ. ನಾನುಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದಿಲ್ಲದಿದ್ದರೂ ಸುಳ್ಳು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಸದರಿ ಹೇಳಿಕೆಗಳನ್ನು ಪ್ರಕರಣಕ್ಕೆ ಅನುಕೂಾಲಕ್ಕೆ ಠಾಣೆಯಲ್ಲಿ ಸೃಷ್ಟಿ ಮಾಡಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಒ

(ಶ್ರೀಮತಿ ನಳಿನ ಎಸ್.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು,
ಮದ್ದೂರು